ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 16–10–2021**

# ಮಾಧ್ಯಮ ಆಹ್ವಾನ

**MEDIA INVITATION**

**Welcome Address to Hon'ble Justice Ritu Raj Awasthi, Chief Justice of Karnatka High Court.**

**Welcome Address by:**

Chairman,
Karnataka State Bar Council,
Bengaluru.

Date: 18 – 10 – 2021 , Monday, Time: 9.45 A.M

Place : Court Hall No 1, Principal Bench of the High Court of Karnataka, Bangalore

# ಪತ್ರಿಕಾ ಪ್ರಕಟಣೆ

**PRESS RELEASE**

## ಕೇಂದ್ರ ಕಾರಗೃಹದಲ್ಲಿ ಸೈಕ್ಯಾಟ್ರಿಕ್ ಹುದ್ದೆಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ):

ಬೆಂಗಳೂರು ಕೇಂದ್ರ ಕಾರಗೃಹಕ್ಕೆ 5 ಸೈಕ್ಯಾಟ್ರಿಕ್ ಸೋಷಿಯಲ್ ವರ್ಕರ್ ಹುದ್ದೆಗಳನ್ನು 11 ತಿಂಗಳ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.(ಹುದ್ದೆಯು ಖಾಯಂ ಹುದ್ದೆಯಾಗಿರುವುದಿಲ್ಲ).

ಅರ್ಜಿ ಸಲ್ಲಿಸುವ ಅಭ್ಯರ್ಥಿಯ ಪದವಿ ಪ್ರಮಾಣ ಪತ್ರ, ಸ್ನಾತಕೋತ್ತರ ಪದವಿಯಲ್ಲಿ ಗಳಿಸಿದ ಅಂಕಗಳು, ಅನುಭವ ಮತ್ತು Post Graduate degree awarded after completion of course of study of minimum 2 years in Mental Health or Pychiatric Social Work, Approved and recognized by Rehabilitation Council of India(RCI) or, Master's Degree in Social Work (Medial and Psychiatry), Master's Degree in Social work ಗಳ ಆಧಾರದ ಮೆಲೆ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ವೇತನ ಪ್ರತಿ ತಿಂಗಳಿಗೆ ರೂ. 25,000/– ರಂತೆ 11 ತಿಂಗಳ ಅವಧಿಗೆ ಮಾತ್ರ ಸೀಮಿತವಾಗಿದ್ದು ಗರಿಷ್ಟ ವಯೋಮಿತಿ 45 ವರ್ಷಗಳು. ಸದರಿ ಹುದ್ದೆಗೆ ಅರ್ಜಿಯನ್ನು 16–10–2021 ರಿಂದ 15–11–2021ರ ಸಂಜೆ 5.30 ಗಂಟೆಯ ಒಳಗಾಗಿ ಮುಖ್ಯ ಅಧೀಕ್ಷಕರು, ಕೇಂದ್ರ ಕಾರಾಗೃಹ, ಪರಪ್ಪನ ಅಗ್ರಹಾರ, ಎಲೆಕ್ಟ್ರಾನಿಕ್ ಸಿಟಿ, ಬೆಂಗಳೂರು–560100 ಕ್ಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080–25733809 ಸಂಪರ್ಕಿಸಲು ಕೋರಿದೆ.

## ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ

ಬೆಂಗಳೂರು, ಅಕ್ಟೋಬರ್ 16 (ಕರ್ನಾಟಕ ವಾರ್ತೆ):

ರಾಜ್ಯ ಸರ್ಕಾರವು, ದಿನಾಂಕ: 20-10-2021ರಂದು ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ, ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು, ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಸಚಿವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಂಡಿದ್ದು, ಕಾರ್ಯಕ್ರಮದ ಉದ್ಘಾಟನೆಯನ್ನು ಸನ್ಮಾನ್ಯ ಮುಖ್ಯಮಂತ್ರಿಗಳಾದ ಬಸವರಾಜ ಎಸ್ ಬೊಮ್ಮಾಯಿ ಅವರು ಮಾಡಲಿರುವರು. ಈ ಸಮಾರಂಭದಲ್ಲಿ, ಮಾನ್ಯ ಮಂತ್ರಿಗಳು, ಶಾಸಕರು, ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು ಭಾಗವಹಿಸಲಿರುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಚುನಾವಣೆ ನಡೆಯುವ ಮತ ಕ್ಷೇತ್ರಗಳಲ್ಲಿನ ಕಾರ್ಮಿಕರಿಗೆ ವೇತನ ಸಹಿತ ರಜೆ.

ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ) :

ರಾಜ್ಯ ಚುನಾವಣಾ ಆಯೋಗವು, ರಾಜ್ಯದ ಸಿಂಧಗಿ ಹಾಗೂ ಹಾನಗಲ್ ಮತಕ್ಷೇತ್ರಗಳು ತೆರವಾದ ಹಿನ್ನೆಲೆಯಲ್ಲಿ ಉಪ ಚುನಾವಣೆ ನಡೆಸಲು ಚುನಾವಣಾ ವೇಳಾ ಪಟ್ಟಿ ಪ್ರಕಟಿಸಿ ದಿನಾಂಕ: 30-10-2021ರ ಶನಿವಾರದಂದು ಮತದಾನ ನಡೆಸಲು ನಿರ್ಧರಿಸಿರುತ್ತದೆ.

ಚುನಾವಣೆ ನಡೆಯುವ ಮತ ಕ್ಷೇತ್ರಗಳಲ್ಲಿ ಮತದಾರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಸಂಬಂಧಪಟ್ಟ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು ಚುನಾವಣಾ ಆಯೋಗದ ಆದೇಶದನುಸಾರ ರಾಷ್ಟ್ರೀಯ ಹಬ್ಬ ಮತ್ತು ರಜಾ ದಿನಗಳ ಕಾಯ್ದೆ 1963ರ ಕಲಂ 3(ಎ) ರನ್ವಯ ಮತದಾನ ನಡೆಯಲಿರುವ ಕ್ಷೇತ್ರಗಳಲ್ಲಿ ಅರ್ಹರಿರುವ ಎಲ್ಲಾ ಕಾರ್ಮಿಕರಿಗೆ ದಿನಾಂಕ: 30-10-2021ರ ಶನಿವಾರದಂದು ವೇತನ ಸಹಿತ ರಜೆ ನೀಡಿ, ಎಲ್ಲಾ ಅರ್ಹ ಕಾರ್ಮಿಕರು ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ಅನವು ಮಾಡಿಕೊಡಬೇಕೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

### ಪ್ರತಿ ತಿಂಗಳು ಕಾರ್ಮಿಕ ಅದಾಲತ್: ಸಚಿವ ಶಿವರಾಂ ಹೆಬ್ಬಾರ್

ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ) :

"ರಾಜ್ಯಾದ್ಯಂತ ನಡೆದ ಕಾರ್ಮಿಕ ಅದಾಲತ್ ಅತ್ಯಂತ ಯಶಸ್ವಿಗೊಂಡಿದ್ದು, ದಾಖಲೆಯ ಪ್ರಮಾಣದಲ್ಲಿ ಪ್ರಕರಣಗಳು ಇತ್ಯರ್ಥಗೊಳಿಸಿ 1.54 ಲಕ್ಷ ಕಾರ್ಮಿಕರಿಗೆ 89.05 ಕೋಟಿ ರೂಪಾಯಿ ಪಾವತಿಸಿದೆ. ಕೋವಿಡ್ ಸಹಾಯ ಧನ, ಕನಿಷ್ಠ ವೇತನ, ಪಿಂಚಣಿ, ಮಾಲೀಕ ಕಾರ್ಮಿಕರ ನಡುವೆ ವಿವಾದ ಹಾಗೂ ವಿವಿಧ ಯೋಜನೆ ಸಹಾಯ ಧನ ಸೇರಿದಂತೆ 2.83 ಲಕ್ಷ ಪ್ರಕರಣಗಳು ಕಾರ್ಮಿಕ ಅದಾಲತ್ ಮೂಲಕವಾಗಿ ಇತ್ಯರ್ಥಗೊಂಡಿದೆ, ಈ ಕಾರ್ಯಕ್ರಮದ ಮೂಲಕವಾಗಿ ರಾಜ್ಯದ ಶ್ರಮಿಕ ವರ್ಗದಲ್ಲಿ ನವ ಚೈತನ್ಯ ಮೂಡಿದೆ ಎಂದು ಕಾರ್ಮಿಕ ಸಚಿವ ಶಿವರಾಂ ತಿಳಿಸಿದ್ದಾರೆ.

ಕಳೆದ ಕೆಲವು ವರ್ಷಗಳಿಂದ ವಿವಿಧ ಕಾರಣಗಳಿಂದ ಬಾಕಿ ಉಳಿದಿದ್ದ ಕಾರ್ಮಿಕರ ಸಮಸ್ಯೆಗಳು ಮತ್ತು ಪರಿಹಾರ ಅರ್ಜಿಗಳನ್ನು ಒಂದೇ ಬಾರಿಗೆ ವಿಲೇವಾರಿ ಮಾಡುವ ಸಲುವಾಗಿ ಕಾರ್ಮಿಕ ಸಚಿವ ಶಿವರಾಂ ಹೆಬ್ಬಾರ್ ಅವರು ರೂಪಿಸಿ ಜಾರಿಗೊಳಿಸಿದ 'ಕಾರ್ಮಿಕ ಅದಾಲತ್' ಯಶಸ್ಸಿನ ನಂತರ ಇದೀಗ ಪ್ರತಿ ತಿಂಗಳು ಇದೇ ಮಾದರಿ 'ಕಾರ್ಮಿಕ ಅದಾಲತ್' ನಡೆಸಲು ಇಲಾಖೆ ಮುಂದಡಿ ಇರಿಸಿದೆ.

ಕಾರ್ಮಿಕರ ಸಹಾಯಧನ ಅರ್ಜಿ, ಪರಿಹಾರ ಅರ್ಜಿ ಸೇರಿದಂತೆ ಕೆಲ ವಿವಾದಗಳು ಅಂತ್ಯ ಕಾಣದೆ ವರ್ಷಾನುಗಟ್ಟಲೆಯಿಂದ ಬಾಕಿ ಇದ್ದದ್ದನ್ನು ಮನಗಂಡ ಕಾರ್ಮಿಕ ಸಚಿವ ಶಿವರಾಂ ಹೆಬ್ಬಾರ್ ಅವರು 'ಕಾರ್ಮಿಕ ಅದಾಲತ್' ಕಾರ್ಯಕ್ರಮ ರೂಪಿಸುವ ಮೂಲಕ ಈ ಅರ್ಜಿಗಳ ವಿಲೇವಾರಿಗೆ ಕ್ರಮವಹಿಸಿದರು. ಇದರ ಪ್ರತಿಫಲವಾಗಿ ರಾಜ್ಯದ ಎಲ್ಲ ತಾಲ್ಲೂಕುಗಳಲ್ಲಿ ಭಾರೀ ಪ್ರಚಾರದೊಂದಿಗೆ ನಡೆದ ಈ ಅದಾಲತ್‌ನಲ್ಲಿ 2.83 ಲಕ್ಷ ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ.

'ಕಾರ್ಮಿಕ ಅದಾಲತ್' ಯೋಜನೆ ಯಶಸ್ವಿ ಜಾರಿಗೆ ಅನುವಾಗುವಂತೆ ಇಲಾಖೆಯು ಹಲವು ಕ್ರಮಗಳನ್ನು ಕೈಗೊಂಡಿತ್ತಲ್ಲದೆ, ತಾಲ್ಲೂಕು ಮತ್ತು ಜಿಲ್ಲಾ ಕಾರ್ಮಿಕ ಅಧಿಕಾರಿಗಳಿಂದ ನಿಗದಿತ ಅರ್ಜಿಗಳ ವಿವರ ಮತ್ತು ಪರಿಹಾರದ ಕ್ರಮಗಳ ಬಗ್ಗೆ ಪದೇ ಪದೇ ಮಾಹಿತಿ ಪಡೆಯುವ ಮೂಲಕ ಕಾರ್ಯಕ್ರಮ ಅನುಷ್ಠಾನಕ್ಕೆ ಶ್ರಮಿಸಿದರೆ, ಸಚಿವ ಶಿವರಾಂ ಹೆಬ್ಬಾರ್ ಅವರು ಕಾರ್ಮಿಕ ಅದಾಲತ್ ಜಾರಿ ಮತ್ತು ನಿರ್ವಹಣೆಗೆ ಅನುವಾಗಲು ನೋಡಲ್ ಅಧಿಕಾರಿಗಳನ್ನು ನೇಮಿಸಿ ಹೆಚ್ಚಿನ ಕಾರ್ಮಿಕರಿಗೆ ಅನುಕೂಲವಾಗುವಂತೆ ಅದಾಲತ್ ಕಾರ್ಯಕ್ರಮ ರೂಪಿಸಿದರು.

ಕಾರ್ಮಿಕ ಇಲಾಖೆ ಇತಿಹಾಸದಲ್ಲೇ ಮೊಟ್ಟ ಮೊದಲ ಬಾರಿಗೆ ನಡೆದ ಇಂತಹ ಅದಾಲತ್‌ನಲ್ಲಿ ಕಟ್ಟಡ ಮತ್ತು ಇತರೆ ಕಾರ್ಮಿಕ ನಿರ್ಮಾಣ ಕಾರ್ಮಿಕ ಮಂಡಳಿ ಹಾಗೂ ಕರ್ನಾಟಕ ಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗೆ ಸಂಬAಧಿಸಿದAತೆ ಬಾಕಿ ಉಳಿದಿದ್ದ ಹೆಚ್ಚಿನ ಅರ್ಜಿಗಳು ವಿಲೇವಾರಿಯಾಗಿದ್ದು, ಅರೆ ನ್ಯಾಯಿಕ ಪ್ರಕರಣಗಳು, ಕೈಗಾರಿಕಾ ವಿವಾದ ಮತ್ತು ದೂರುಗಳಿಗೆ ಸಂಬAಧಿಸಿದ ಅರ್ಜಿಗಳು ಬಾಕಿ ಇರುವ ಪರಿಣಾಮ ಸಚಿವ ಶಿವರಾಂ ಹೆಬ್ಬಾರ್ ಅವರ ಸೂಚನೆಯಂತೆ ಇಲಾಖೆಯು ಪ್ರತಿ ತಿಂಗಳ ಒಂದು ದಿನ ತಾಲ್ಲೂಕು ಮಟ್ಟದಲ್ಲಿ ಕಾರ್ಮಿಕ ಅದಾಲತ್ ನಡೆಸುವಂತೆ ಇಲಾಖೆಯು ಆದೇಶಿಸಿದೆ.

ಆಗಸ್ಟ್- ಸೆಪ್ಟೆಂಬರ್ ಮಾಹೆಯಲ್ಲಿ ನಡೆದ ಕಾರ್ಮಿಕ ಅದಾಲತ್ ಯಶಸ್ಸಿನ ಹಿನ್ನೆಲೆಯಲ್ಲಿ ಫಲಾನುಭವಿಗಳಿಗೆ ಹಾಗೂ ಕಾರ್ಮಿಕರಿಗೆ ಶೀಘ್ರ ನ್ಯಾಯ ಒದಗಿಸಲು ಹಾಗೂ ಅರ್ಹ ಸೌಲಭ್ಯಗಳನ್ನು ತಲುಪಿಸುವ ಹಿತದೃಷ್ಟಿಯಿಂದ ಇಲಾಖೆಯ ಹಿರಿಯ ಕಾರ್ಮಿಕರ ನಿರೀಕ್ಷಕರು, ಕಾರ್ಮಿಕ ನಿರೀಕ್ಷಕರು ವಿವಿಧ ಕಾರ್ಮಿಕ ಕಾಯ್ದೆಗಳಡಿ ಹಾಗೂ ವಿವಿಧ ಮಂಡಳಿಗಳ ಮೂಲಕ ಅನುಷ್ಠಾನಗೊಳಿಸುವ ಯೋಜನೆಗಳಡಿ ಸ್ವೀಕೃತವಾಗಿ ಬಹಳ ಕಾಲದಿಂದ ಇತ್ಯರ್ಥವಾಗದೆ ಬಾಕಿ ಉಳಿದಿರುವ ಪ್ರಕರಣಗಳು/ ಕಡತಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲು ಪ್ರತಿ ತಾಲ್ಲೂಕುಗಳಲ್ಲಿ ತಿಂಗಳಲ್ಲಿ ಒಂದು ದಿನ ಕಾರ್ಮಿಕ ಅದಾಲತ್ ನಡೆಸಲು ಇಲಾಖೆ ಆಯುಕ್ತ ಅಕ್ರಂ ಪಾಷ ಅವರು ಆದೇಶಿಸಿದ್ದಾರೆ.

ಕಾರ್ಮಿಕ ಅದಾಲತ್ ಅನ್ನು ನಿರಂತರವಾಗಿ ಸಮರೋಪಾದಿಯಲ್ಲಿ ಸಂಘಟಿಸುವ ಮೂಲಕ ಬಡ ಕಾರ್ಮಿಕರಿಗೆ ನೆರವು ಒದಗಿಸಲು ಹಾಗೂ ಬಾಕಿ ಇರುವ ಗರಿಷ್ಠ ಮಟ್ಟದ ಪ್ರಕರಣಗಳನ್ನು ಶೂನ್ಯಕ್ಕೆ ಇಳಿಸಬೇಕೆಂಬ ರಾಜ್ಯ ಸರ್ಕಾರದ ಸ್ಪಷ್ಟ ಸೂಚನೆ ನೀಡಿದ್ದು, ಅದಾಲತ್ ಜಾರಿಯನ್ನು ಗಂಭೀರವಾಗಿ ಪರಿಗಣಿಸುವಂತೆ ಆದೇಶದಲ್ಲಿ ಸೂಚಿಸಲಾಗಿದ್ದು, ಅದಾಲತ್‌ಗೆ ಸ್ಥಳೀಯವಾಗಿಯೇ ಸೂಕ್ತ ದಿನಾಂಕ ನಿರ್ಧರಿಸಿ ಪ್ರಚಾರ ಕೈಗೊಂಡು ಕಾರ್ಯಕ್ರಮ ನಡೆಸುವಂತೆ ಆದೇಶದಲ್ಲಿ ವಿವರಿಸಲಾಗಿದೆ.

ಪ್ರಾದೇಶಿಕ ವ್ಯಾಪ್ತಿಯ ಎಲ್ಲಾ ಉಪ ಕಾರ್ಮಿಕ ಆಯುಕ್ತರು, ವಿಭಾಗೀಯ ಮಟ್ಟದ ಅಧಿಕಾರಿಗಳಾದ ಸಹಾಯಕ ಕಾರ್ಮಿಕ ಆಯುಕ್ತರು ತಮ್ಮ ಕಚೇರಿಗಳ ವ್ಯಾಪ್ತಿಯಲ್ಲಿ ಬಾಕಿ ಇರುವ ಪ್ರಕರಣಗಳ ಮತ್ತು ಅರ್ಜಿಗಳ ವಿಲೇವಾರಿಗೆ ಕ್ರಮಕೈಗೊಂಡು ಅಧೀನ ಅಧಿಕಾರಿಗಳಾದ ಕಾರ್ಮಿಕ ಅಧಿಕಾರಿ, ಹಿರಿಯ ಕಾರ್ಮಿಕ ನಿರೀಕ್ಷಕರು ಮತ್ತು ಕಾರ್ಮಿಕ ನಿರೀಕ್ಷಕರುಗಳು ತಮ್ಮ ವ್ಯಾಪ್ತಿಯ ಪ್ರಕರಣಗಳ ಬಗ್ಗೆ ಆಗ್ಗಿಂದಾಗ್ಗೆ ಸಭೆ ನಡೆಸಿ ಸಲಹೆ ಸೂಚನೆಗಳನ್ನು ನೀಡುವ ಮೂಲಕ ಅರ್ಜಿಗಳ ವಿಲೇವಾರಿಯಲ್ಲಿ ತೊಡಗಿಕೊಳ್ಳಬೇಕೆಂದು ಸೂಚಿಸಲಾಗಿದೆ.

ಕಾರ್ಮಿಕ ಅದಾಲತ್ ಸಮರ್ಥ ಜಾರಿಗೆ ಅನುವಾಗುವಂತೆ ಅದಾಲತ್‌ನಲ್ಲಿ ವಿಲೇವಾರಿಯಾದ ಅರ್ಜಿಗಳ ಬಗ್ಗೆ ಜಿಲ್ಲಾವಾರ ಮಾಹಿತಿಯನ್ನು ಎಲ್ಲ ಉಪ ಕಾರ್ಮಿಕ ಆಯುಕ್ತರು ಕ್ರೂಢೀಕರಿಸಿ ಪ್ರತಿ ತಿಂಗಳ 10ನೇ ತಾರೀಖಿಗೂ ಮುನ್ನ ಕೇಂದ್ರ ಕಚೇರಿಗೆ ತಲುಪಿಸುವಂತೆ ಆಯುಕ್ತರು ತಮ್ಮ ಆದೇಶದಲ್ಲಿ ಸೂಚನೆ ನೀಡುವ ಮೂಲಕ ಅದಾಲತ್ ಯಶಸ್ಸಿನ ಬಗ್ಗೆ ನಿಗಾವಹಿಸುವ ಮುನ್ಸೂಚನೆ ನೀಡಿದ್ದಾರೆ.

# FoSTac ತರಬೇತಿ ಕಾರ್ಯಕ್ರಮ ಕಡ್ಡಾಯ

ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ) :

ಸಣ್ಣ ಆಹಾರ ಮಾರಾಟಗಾರರು, ಉತ್ಪಾದಕರು, ಆಹಾರ ಸಂಸ್ಕರಣ ಉದ್ಯಮದವರು ಹೀಗೆ ವಿವಿಧ ಎಲ್ಲಾ ಉದ್ಯಮದ ವ್ಯಾಪರಸ್ಥರಿಗೆ ಆಹಾರ ಸೇವೆಗಳ ಗುಣಮಟ್ಟದ ಉದ್ದೇಶಗಳನ್ನು ಬಲಪಡಿಸುವ ಸಲುವಾಗಿ FSSAI ಪ್ರಾಧಿಕಾರವು FoSTac ತರಬೇತಿ ಕಾರ್ಯಕ್ರಮವನ್ನು ರೂಪಿಸಿದೆ. ಈ ತರಭೇತಿಯನ್ನು ಪ್ರತಿಯೊಬ್ಬ ಆಹಾರ ಉದ್ದಿಮೆದಾರರು ಕಡ್ಡಾಯವಾಗಿ ಪಡೆದುಕೊಂಡು ಪ್ರಮಾಣ ಪತ್ರವನ್ನು ಪಡೆಯಬೇಕಾಗಿರುತ್ತದೆ.

FSSAI ಪ್ರಾಧಿಕಾರದ ಶಿಫಾರಸ್ಸಿನಂತೆ ಎಲ್ಲಾ ಆಹಾರ ಉದ್ಯಮದವರು ವ್ಯಾಪ ನಡೆಸುವ / ಆಹಾರ ತಯಾರಿಸುವ ಜಾಗದಲ್ಲಿ ಕನಿಷ್ಠ 25 ಜನರಿಗೆ ಒಬ್ಬರಂತೆ ತರಬೇತಿ ಪಡೆದು ಪ್ರಮಾಣ ಪತ್ರ ಹೊಂದಿರುವ ಆಹಾರ ನಿರ್ವಾಹಕರು ಇರತಕ್ಕದ್ದು ಮತ್ತು ಪ್ರತಿ ವ್ಯಾಪಾರ ಸ್ಥಳಗಳಲ್ಲಿ ಕನಿಷ್ಠ ಒಬ್ಬರು ಆಹಾರ ನಿರ್ವಾಹಕರು ಇರತಕ್ಕದ್ದು.

ಎಲ್ಲಾ ಆಹಾರ ವಹಿವಾಟು / ಉದ್ದಿಮೆದಾರರು (FBO's) ತರಬೇತಿಯ ಸದುಪಯೋಗವನ್ನು ಪಡೆದುಕೊಳ್ಳುವುದು. ಹೆಚ್ಚಿನ ಮಾಹಿತಿಗಾಗಿ ಅಂಕಿತಾಧಿಕಾರಿಗಳ ಕಚೇರಿ, ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಪ್ರಾಧಿಕಾರ, ಬಿ.ಬಿ.ಎಂ.ಪಿ ಉತ್ತರ ವಲಯ , ಸಾರ್ವಜನಿಕ ಆರೋಗ್ಯ ಸಂಸ್ಥೆಯ ಕಟ್ಟಡ, ಶೇಷಾದ್ರಿ ರಸೆ, ಬೆಂಗಳೂರು – 560001 ಅಥವಾ ಇ-ಮೇಲ್ dobbmpnorth4@gmail.com ಗೆ ಸಂಪರ್ಕಿಸಬಹುದಾಗಿದೆ.

ವಿಶೇಷ ಸೂಚನೆ: ತರಬೇತಿಯ ಜೊಎಗೆ ಎಲ್ಲಾ ಆಹಾರ ವಹಿವಾಟು / ಉದ್ದಿಮೆದಾರರು (FBO's) ಎಫ್.ಎಸ್.ಎಸ್.ಎ.ಐ (FSSAI BBMP North) ಪರವಾನಿಗಿ / ನೊಂದಣಿ ಪಡೆದುಕೊಳ್ಳಲು ಕಡ್ಡಾಯವಾಗಿದೆ. ಇಲ್ಲದಿದ್ದಲ್ಲಿ ಎಫ್.ಎಸ್.ಎಸ್.ಎ.ಐ ಕಾಯ್ದೆಯ ಸೆಕ್ಷನ್ 63ರ ಪ್ರಕಾರ 5 ಲಕ್ಷದ ವರೆಗೆ ದಂಡ ಮತ್ತು 6 ತಿಂಗಳ ವರೆಗೆ ಕಾರಾಗೃಹ ಮತ್ತು ಕೋರ್ಟಿನಲ್ಲಿ ಮೊಕದ್ದಮೆ / ದಾವೆ ಹಾಲು ಕಾನೂನಿನಲ್ಲಿ ಅವಕಾಶವಿರುವುದಾಗಿ ಪ್ರಕಟಣೆ ತಿಳಿಸಿದೆ.

# Rashtriya Indian Military College – Test in December 2021

BENGALURU, OCTOBER 16 (KARNATAKA INFORMATION):

Applications are invited from Girls of Karnataka for admission to Rashtriya Indian Military College (RIMC), Dehradun (Uttarakhand) for July 2022 Term. The entrance Examination for same will be conducted in Bangalore on 18th December 2021 (Saturday). Candidates appearing for the above test should not be less than 11 ½ years in age but should not have attained the age of 13 years as on 01st July 2022i.e, they should have been born not earlier than 02nd July 2009 and not later than 01st January 2011. The girl should either be studying in Class VII or Passed Class VII from any recognized school at the time of admission to the RIMC, i.e. on 1st July 2022. the primary aim of this institution is to prepare the girls for entry into Defence Services and provide quality all around education to young girls. The annual fee is presently Rs. 1,07,500/- for General

Candidates and Rs. 93,900/- for SC /ST candidates per year. It may increase from time to time, at the time of entry a Security Deposit of Rs. 30,000/- is to be made (including in annual fee). This is refunded when the cadet graduates from the college.

The prospectus – cum – application form and booklet of old question papers can be obtained from the Rashtriya Indian Military College, Garhi Cantt, Dehradun Uttarkhand, Pin – 248003.

The prospectus – cum – application form and booklet of the old question papers can also obtained by making online payment of Rs. 600/- for General Candidates and Rs. 555/- for SC / ST Candidates on RIMC website www.rimc.gov.in. On receipt of the payment the prospectus – cum – application form and booklet of old papers will be dispatched by Speed post only.

Prescribed application forms duly completed, in duplicate, should reach Director, Department of Sainik Welfare and Resettlement, Field Marshal K M Cariappa Bhavan, 58, Field Marshal KM Cariappa Road, Bangalore – 560 025 along with the following document on or befor 15/11/2021

1. Five passport size photographs (including on each affixed on the application form)
2. Attested copy of Birth Certificate issued by Municipal Corporatin / Gram Panchayat (in English version only)
3. Attested Copy of SC / St Certificate for SC / ST candidates (in English Version only)
4. Admit Card envelope duly addressed and affixed with Rs. 42 / - for sending the Admission Tickets by Speed post / Registered Post
5. Certificate from the Principal of the school in original with photograph on it attested stating date of birth and in wich class studying.
6. Domicile Certificate from Thasildar
7. Photo copy of Adhar Card (both Side) is mandatory

For further details contact 080- 25589459 or your nearest District Sainik Welfare and Resettlement offices.

## ಕನ್ನಡದಲ್ಲಿ ವಿಜ್ಞಾನ ಉಪನ್ಯಾಸ ಸ್ಪರ್ಧೆಯ ಅರ್ಜಿ ಅಹ್ವಾನ

ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ) :

ವಿಜ್ಞಾನವನ್ನು ಮಾತೃಭಾಷೆಯ ಮೂಲಕ ಜನಸಾಮಾನ್ಯರ ಬಳಿಗೆ ಕೊಂಡೊಯ್ಯುವ, ಶೈಕ್ಷಣಿಕ ವಲಯದಲ್ಲಿ ವಿಜ್ಞಾನವನ್ನು ಜನಪ್ರಿಯಗೊಳಿಸುವ ಉದ್ದೇಶದಿಂದ ಹಾಗೂ ಕನ್ನಡದಲ್ಲಿ ಆಕರ್ಷಕವಾಗಿ ಜನಪ್ರಿಯ ಶೈಲಿಯಲ್ಲಿ ವಿಜ್ಞಾನ ಸಂವಹನ ಸಾಧ್ಯ ಎಂಬುದನ್ನು ಸಾಬೀತುಗೊಳಿಸಲು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ವತಿಯಿಂದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿಜ್ಞಾನ ಪದವಿ ಕಾಲೇಜು ವಿದ್ಯಾರ್ಥಿಗಳಿಗಾಗಿ ಹಾಗೂ ಬಿ.ಎಡ್. ಪ್ರಶಿಕ್ಷಣಾರ್ಥಿಗಳಿಗಾಗಿ ಅಂತರ ವಿಶ್ವವಿದ್ಯಾಲಯ ಮಟ್ಟದ ಮತ್ತು ರಾಜ್ಯಮಟ್ಟದ ಕನ್ನಡ ವಿಜ್ಞಾನ ಉಪನ್ಯಾಸ ಸ್ಪರ್ಧೆಯನ್ನು ರಾಜ್ಯಾದ್ಯಂತ ಆಯೋಜಿಸಲಾಗುತ್ತಿದೆ. ರಾಜ್ಯದ ಯಾವುದೇ ವಿಶ್ವವಿದ್ಯಾಲಯದ ಅಡಿಯಲ್ಲಿ ಮೂಲ ವಿಜ್ಞಾನವನ್ನು (ಭೌತಶಾಸ್ತ್ರ,

ಜೀವಶಾಸ್ತ್ರ, ರಸಾಯನಶಾಸ್ತ್ರ, ಗಣಿತ ವಿಷಯಗಳನ್ನು) ವ್ಯಾಸಾಂಗ ಮಾಡುತ್ತಿರುವ ಪದವಿ ವಿದ್ಯಾರ್ಥಿಗಳು ಹಾಗೂ ಪಿ.ಸಿ.ಎಂ ಅಥವಾ ಸಿಬಿಜಡ್ ಬೋಧನಾ ವಿಧಾನ ಆಯ್ದುಕೊಂಡಿರುವ ಬಿ.ಎಡ್ ಪ್ರಶಿಕ್ಷಣಾರ್ಥಿಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ.

ವಿಶ್ವವಿದ್ಯಾಲಯದ ಮಟ್ಟದ ಸ್ಪರ್ಧೆಯಲ್ಲಿ ಭೌತ ವಿಜ್ಞಾನ, ಜೀವವಿಜ್ಞಾನ, ರಸಾಯನ ವಿಜ್ಞಾನ ಹಾಗೂ ಗಣಿತ ವಿಭಾಗಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ತಲಾ ಇಬ್ಬರು ವಿದ್ಯಾರ್ಥಿಗಳಂತೆ ಒಟ್ಟು 8 ವಿದ್ಯಾರ್ಥಿಗಳನ್ನು ಒಂದು ವಿಶ್ವವಿದ್ಯಾಲಯದಿಂದ ಆಯ್ಕೆ ಮಾಡಲಾಗುತ್ತದೆ. ವಿಶ್ವವಿದ್ಯಾಲಯ ಮಟ್ಟದ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳು ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲು ಅರ್ಹತೆ ಪಡೆಯುತ್ತಾರೆ. ಆಸಕ್ತ ವಿದ್ಯಾರ್ಥಿಗಳು ನಿಗದಿತ ಅರ್ಜಿಯನ್ನು ಭರ್ತಿ ಮಾಡಿ ನವೆಂಬರ್ 5, 2021ರ ಒಳಗೆ ನೊಂದಣಿ ಮಾಡಿಕೊಳ್ಳುವುದು.

ಹೆಚ್ಚಿನ ಮಾಹಿತಿಗಾಗಿ ಈ ಕಾರ್ಯಕ್ರಮದ ರಾಜ್ಯ ಸಂಯೋಜಕರಾದ ಎಚ್.ಎಸ್.ಟಿ. ಸ್ವಾಮಿ ಮೊಬೈಲ್ ಸಂ. 94485 65534, ಯೋಜನಾ ಸಹಾಯಕರಾದ ಶ್ರೀಮತಿ ದೇವಿಕಾ ಕೀರ್ತಿ ಮೊಬೈಲ್ ಸಂ. 94495 30245, ರಾಜಶೇಖರಗೌಡ ಪಾಟೀಲ ಮೊಬೈಲ್ ಸಂ. 90084 42557 ಹಾಗೂ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಕೇಂದ್ರ ಕಚೇರಿ ಮೊಬೈಲ್ ಸಂ. 94835 49159 ಇವರನ್ನು ಸಂಪರ್ಕಿಸುವುದು. ಹಾಗೂ https://sites .google.com/view/vignanaupanyasa-2021/home ಈ ಲಿಂಕ್ ಬಳಸಿ ಉಚಿತವಾಗಿ ಆನ್‍ಲೈನ್ ಮೂಲಕ ನೊಂದಣಿ ಮಾಡಿಕೊಳ್ಳಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## 2021ನೇ ಸಾಲಿನ ಪ್ರಥಮ ಇಲಾಖಾ ಪರೀಕ್ಷೆಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು, 16ನೇ ಅಕ್ಟೋಬರ್ 2021(ಕರ್ನಾಟಕ ವಾರ್ತೆ):**

ಕರ್ನಾಟಕ ಲೋಕ ಸೇವಾ ಆಯೋಗವು 2021ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳಿಗೆ ಸರ್ಕಾರಿ/ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ನೌಕರರಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಅಭ್ಯರ್ಥಿಗಳು ಅರ್ಜಿ ಶುಲ್ಕವನ್ನು ಪಾವತಿಸಲು ದಿನಾಂಕ 12-11-2021 (ರಾತ್ರಿ 11-45 ಗಂಟೆಯೊಳಗೆ) ಕೊನೆಯ ದಿನಾಂಕವಾಗಿದೆ. ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಆಯೋಗದ ವೆಬ್‍ಸೈಟ್‍ನಲ್ಲಿ ಪ್ರಕಟಿಸಿರುವ ಅಧಿಸೂಚನೆಯನ್ನು ನೋಡಬಹದಾಗಿದೆ. ಅರ್ಜಿಗಳನ್ನು ಸಲ್ಲಿಸುವ ಹಂತದಲ್ಲಿ ತಾಂತ್ರಿಕ ಸಮಸ್ಯೆಗಳುಂಟಾದಲ್ಲಿ ಸೇವಾ ಸಿಂಧುವಿನ ಸಹಾಯವಾಣಿ 080-22279954, 8088304855 ಮತ್ತು 6361799796ಗಳನ್ನು ಸಂಪರ್ಕಿಸಲು ಕೋರಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## "ಪರ್ವ" – ವಿರಾಟ್ ದರ್ಶನ

**ಬೆಂಗಳೂರು, 16ನೇ ಅಕ್ಟೋಬರ್ 2021(ಕರ್ನಾಟಕ ವಾರ್ತೆ):**

ವ್ಯಾಸ ಮಹರ್ಷಿಗಳು, ಮಹಾಭಾರತವನ್ನು ಆಧಾರವಾಗಿಟ್ಟುಕೊಂಡು ರಚಿತವಾಗಿರುವ ಕಾದಂಬರಿ "ಪರ್ವ". ಇದೊಂದು ಮರು ಸೃಷ್ಠಿ. ಕಾವ್ಯ ಇತಿಹಾಸ ಪುರಾಣಗಳ ಮಿಶ್ರಣವಾದ ಪ್ರಾಚೀನ ಮಹಾಕೃತಿಯನ್ನು ಆಧುನಿಕ ಸಾಹಿತ್ಯ ಪ್ರಕಾರವಾದ ಕಾದಂಬರಿಯನ್ನಾಗಿ ನಿರ್ಮಿಸುವ ಪ್ರಕ್ರಿಯೆಯಲ್ಲಿ ಶ್ರೇಷ್ಠ ಕಾದಂಬರಿಕಾರನೊಬ್ಬನ ಪಕ್ವವಾದ ಮನಸ್ಸು, ಕಾಲ ದೇಶಗಳನ್ನು ದಾಟಿ ಹೇಗೆ ಕೆಲಸ ಮಾಡಿದೆ ಎಂಬುದನ್ನು "ಪರ್ವ" ಕಾದಂಬರಿಯಲ್ಲಿ ನೋಡಬಹುದು. ಡಾ. ಎಸ್.ಎಲ್. ಭೈರಪ್ಪರಂತಹ ಸೃಜನಶೀಲ ಪ್ರತಿಭೆಯ ಸಾಹಸ ಈ ಬೃಹತ್‍ಕಾದಂಬರಿಯ ಪುಟ ಪುಟಗಳಲ್ಲಿ ಸ್ಫುಟಗೊಂಡಿದೆ. ಮೂಲ ಕೃತಿಯ ಅಲೌಖಿಕ ಅಂಶಗಳಿಂದ ಪಾರಾಗಿ, ಸಾಮಾನ್ಯರನ್ನೂ, ಅಸಾಮಾನ್ಯರನ್ನು ಒಂದೇ ದೃಷ್ಠಿಯಿಂದ ನೋಡಿ ಆದರ್ಶ, ವಾಸ್ತವತೆಗಳನ್ನು ಮೇಳವಿಸಿ, ಯಾವುದೋ ಕಾಲದ ವ್ಯಕ್ತಿ ಸಂಗತಿಗಳು ನಮ್ಮ ಕಾಲದವಾಗಿ, ನಮಗೆ ತೀರಾ ಹತ್ತಿರವಾಗಿ ಮಾರ್ಪಡುವ ಕಲಾ ಕೌಶಲ್ಯವನ್ನು ಈ ಮಹಾಕೃತಿ ತೋರಿಸುತ್ತದೆ. ಕಾದಂಬರಿಕಾರರಿಗಿರುವ ಮಾನವ ಸ್ವಭಾವದ ನಿಕಟ ಪರಿಚಯ. ಈ ಪರಿಚಯವನ್ನು ತೋರುವಲ್ಲಿ ಅವರು ಮೆರೆಯುವ ಸಂಯಮ ಹಾಗೂ ಅಲಿಪ್ತತೆಗಳು ವ್ಯಾಸ ಗುಣಗಳೇ ಆಗಿವೆ. ಫಲವಾಗಿ "ಪರ್ವ" ನಮ್ಮ ಕಾಲದ ಒಂದು ಶ್ರೇಷ್ಠ ಕಲಾಕೃತಿಯಾಗಿದೆ. ಇದೀಗ ಈ ಕೃತಿ ವಿಶ್ವ ಮನ್ನಣೆ ಪಡೆದಿದೆ. ಶೃಂಗರಾಷ್ಟ್ರಗಳ ಆಶಯದಂತೆ ಪರ್ವ ಕಾದಂಬರಿ ವಿಶ್ವದ ಅನೇಕ ಭಾಷೆಗಳಲ್ಲಿ

ಅನುವಾದಗೊಳ್ಳುತ್ತಿದೆ. ಪ್ರಸ್ತುತ ರಷ್ಯನ್, ಮ್ಯಾಂಡರಿನ್ ಭಾಷೆಗಳಲ್ಲಿ ಅನುವಾದಗೊಂಡಿದೆ. ಈಗಾಗಲೇ ಭಾರತದ ಅನೇಕ ಭಾಷೆಗಳಲ್ಲಿ ಅನುವಾದಗೊಂಡು ಇದೊಂದು ಸಾರ್ವಕಾಲಿ ಕೃತಿಯಾಗಿ ವಿಜೃಂಭಿಸಿದೆ.

600 ಪುಟಗಳ ಈ ಬೃಹತ್ ಕೃತಿಗೆ ಯಾವುದೇ ಕೋಪವಾಗದಂತೆ ಅಷ್ಟೇ ಗಟ್ಟಿಯಾಗಿ ವಸ್ತುನಿಷ್ಠವಾಗಿ ಆಧುನಿಕ ರಂಗ ಪರಿಕಲ್ಪನೆಗೆ ಹೊಸ ಆಯಾಮ ಕೊಡುವ ನಿಟ್ಟಿನಲ್ಲಿ ಖ್ಯಾತ ರಂಗ ನಿರ್ದೇಶಕ ಪ್ರಕಾಶ್ ಬೆಳವಾಡಿಯವರು ರಂಗಪಠ್ಯ ರೂಪಿಸಿ, ಈ ಮಹಾ ರಂಗ ಪ್ರಯೋಗವನ್ನು ನಿರ್ದೇಶನ ಮಾಡಿದ್ದಾರೆ. ಕಲಾವಿದರು – ತಂತ್ರಜ್ಞರು ಸೇರಿ, ಸರಿ ಸುಮಾರು 50 ಜನರ ತಂಡ ನಿರಂತರ ಆರು ತಿಂಗಳ ಪರಿಶ್ರಮದಿಂದ ಈ ಮಹಾ ರಂಗಪ್ರಯೋಗವನ್ನು ಕಟ್ಟಿದೆ. ಕನ್ನಡ ಕಾಯಕ ವರ್ಷದಲ್ಲಿ "ಕನ್ನಡ ರಂಗಭೂಮಿ" ವಿಶ್ವದ ಮತ್ತು ಭಾರತೀಯ ರಂಗಭೂಮಿಯಲ್ಲಿ ಒಂದು ಮೈಲಿಗಲ್ಲಾಗಿ ನಿಲ್ಲಬೇಕೆಂಬುದು ಮೈಸೂರು ರಂಗಾಯಣದ ಕನಸು. ಈ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ಕೋವಿಡ್ – 19 ಎಂಬ ಮಹಾಮಾರಿಯ ಸಂಕಷ್ಟದ ಈ ದುರಂತದ ಕಾಲದಲ್ಲೇ ಇಂತಹದೊಂದು ಮಹಾ ರಂಗಪ್ರಯೋಗ ಘಟಿಸಿದೆ.

ನಮ್ಮ ರಂಗಭೂಮಿ ಸಾಹಸಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆರ್ಥಿಕ ನೆರವು ನೀಡಿ ಸಹಕರಿಸಿದೆ. ನಾಟಕದ ಸಿದ್ದತೆಗೆ ರೂ. 50.00 ಲಕ್ಷಗಳನ್ನು ಬಿಡುಗಡೆ ಮಾಡಿದೆ. ಈ ಹಣದಲ್ಲಿ ಕಳೆದ ಒಂದು ವರ್ಷದಿಂದ ಪರ್ವಕ್ಕಾಗಿ ಆಯ್ಕೆ ಮಾಡಿಕೊಂಡ ಸರಿ ಸುಮಾರು 35ಕ್ಕೂ ಹೆಚ್ಚು ಕಲಾವಿದರಿಗೆ ಮಾಸಿಕ ಸಂಭಾವನೆ ನೀಡುತ್ತಾ ಬಂದಿದ್ದೇವೆ. ರೂ.38.00 ಲಕ್ಷ ಗಳನ್ನು ಇದಕ್ಕಾಗಿಯೇ ವೆಚ್ಚ ಮಾಡಿದ್ದೇವೆ.

ಈ ಮಹಾ ರಂಗ ಪ್ರಯೋಗ "ಪರ್ವ" ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿ, ರಾಷ್ಟ್ರದ ಐದು ಪ್ರಮುಖ ಸ್ಥಳಗಳಲ್ಲಿ ಪ್ರದರ್ಶನಗೊಳ್ಳಬೇಕೆಂಬ ಯೋಜನೆಯನ್ನು ರಂಗಾಯಣ ರೂಪಿಸಿದೆ. ನಮ್ಮ ರಂಗಪಯಣದ ಮೊದಲ ಹೆಜ್ಜೆ ಬೆಂಗಳೂರಿನಿಂದ ಆರಂಭಗೊಳ್ಳುತ್ತಿದೆ. ರವೀಂದ್ರ ಕಲಾಕ್ಷೇತ್ರದಲ್ಲಿ 2021ನೇ ಅಕ್ಟೋಬರ್ 23 ಮತ್ತು 24ರಂದು ಬೆಳಿಗ್ಗೆ 10.00 ರಿಂದ ಸಂಜೆ 6.00 ಗಂಟೆಯವರೆಗೆ ರಂಗ ಪ್ರಯೋಗ ಪ್ರದರ್ಶನಗೊಳ್ಳಲಿದೆ.

ನಾಲ್ಕು ವಿರಾಮಗಳು ಸೇರಿ 8 ತಾಸುಗಳ ನಾಟಕ ಬೆಳಿಗ್ಗೆ 10.00ಕ್ಕೆ ಆರಂಭವಾದರೆ, ಸಂಜೆ 6.00 ಗಂಟೆಗೆ ಮುಗಿಯಲಿದೆ. ಮಧ್ಯಾಹ್ನದ ಊಟಕ್ಕೆ 30 ನಿಮಿಷಗಳ ವಿರಾಮ. ಇನ್ನುಳಿದಂತೆ ತಲಾ 10 ನಿಮಿಷಗಳ ಮೂರು ಚಹಾ ವಿರಾಮ, ಈ ಮಹಾ ರಂಗಪ್ರಯೋಗದ ಖರ್ಚು ವೆಚ್ಚ ದೊಡ್ಡ ಪ್ರಮಾಣದಲ್ಲಿರುವುದು ಮತ್ತು ದೀರ್ಘ ಪ್ರದರ್ಶನ ಶ್ರಮ ಎಲ್ಲವನ್ನು ಪರಿಗಣಸಿ ರೂ. 500/– ಮತ್ತು ರೂ. 250/– ಬೆಲೆಯ ಟಿಕೆಟ್‌ಗಳನ್ನು ಇಡಲಾಗಿದೆ. ಟಿಕೇಟ್‌ಗಳನ್ನು ರವೀಂದ್ರ ಕಲಾಕ್ಷೇತ್ರದ ಕೌಂಟರ್‌ನಲ್ಲಿ ಮತ್ತು ರಂಗಾಯಣದ ವೆಬ್‌ಸೈಟ್ www.rangayana.org ನಲ್ಲಿ ಆನ್‌ಲೈನ್ ಮೂಲಕ ಪಡೆಯಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.